(6)

1

ಕರ್ನಾಟಕ ಸರ್ಕಾರದ ನಡವಳಿಗಳು
(ಜಲಸಂಪನ್ಮೂಲ ಇಲಾಖೆ)

ವಿಷಯ:- ಉಡುಪಿ ಜಿಲ್ಲೆ, ಕಾರ್ಕಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಸುತ್ತಮುತ್ತಲಿನ ಗ್ರಾಮಗಳಿಗೆ ಕುಡಿಯುವ ನೀರು ಹಾಗೂ 1500 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಎಣ್ಣೆಹೊಳೆ ಏತ ನೀರಾವರಿ ಯೋಜನೆಯ ರೂ.108.00ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:- ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ:ಕನೀನಿ/ವಿಪಿಜಡ್/ಎಣ್ಣೆಹೊಳೆ ಏನೀಯೋ/2019-20/1938 ದಿನಾಂಕ:16.07.2019 ಹಾಗೂ 3036 ದಿನಾಂಕ:13.09.2019.

****

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರ ದಿನಾಂಕ:16.07.2019ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು, ಉಡುಪಿ ಜಿಲ್ಲೆ, ಕಾರ್ಕಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಅಜೇಕರ್ ಗ್ರಾಮದ ಬಳಿ ವೆಂಟೆಂಡ್ ಡ್ಯಾಂ (ಬ್ಯಾರೇಜ್) ನಿರ್ಮಿಸಿ, ಅಜೇಕರ್, ಮರ್ನೆ, ಕೊರಂಜಿ ಬೈಲು, ಬೊಲತೊಟ್ಟು, ಹಿರ್ಗನ, ದೆವಸೆ, ಮುಂಡಾಲ್, ಹೆರ್ಮುಡೆ ಗ್ರಾಮಗಳ 1500 ಹೆಕ್ಟೇರ್ (3707 ಎಕರೆ) ಭೂಮಿಗೆ ನೀರಾವರಿ ಸೌಲಭ್ಯ ಹಾಗೂ ಕುಡಿಯುವ ನೀರನ್ನು ಒದಗಿಸುವಂತೆ ಸ್ಥಳೀಯ ರೈತರು ಹಾಗೂ ಜನಪ್ರತಿನಿಧಿಗಳು ಒತ್ತಾಯಿಸುತ್ತಿರುವುದರಿಂದ, ಉಡುಪಿ ಜಿಲ್ಲೆ, ಕಾರ್ಕಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಸುತ್ತಮುತ್ತಲಿನ ಗ್ರಾಮಗಳಿಗೆ ಕುಡಿಯುವ ನೀರು ಹಾಗೂ ಸುಮಾರು 1500 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಎಣ್ಣೆಹೊಳೆ ಏತ ನೀರಾವರಿ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ. ಸದರಿ ಯೋಜನೆಯು 2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಾಗಿರುತ್ತದೆ.

ಮುಂದುವರೆದು, ಸದರಿ ಯೋಜನೆಯ ವಿವರವಾದ ಯೋಜನಾ ವರದಿಯನ್ನು ದಿನಾಂಕ:06.06.2019 ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 56ನೆಯ ಸಭೆಯಲ್ಲಿ ಮಂಡಿಸಲಾಗಿದ್ದು, ಸಮಿತಿಯು ವಿವರವಾದ ಯೋಜನಾ ವರದಿಗೆ ತೀರುವಳಿ ನೀಡಿ, ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆ ಪಡೆಯುವಂತೆ ಶಿಫಾರಸ್ಸು ಮಾಡಿರುತ್ತದೆ; ಅಂದಾಜು ಪರಿಶೀಲನಾ ಸಮಿತಿಯ ಶಿಫಾರಸ್ಸಿನಂತೆ ದಿನಾಂಕ:09.07.2019 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 88ನೇ ಸಭೆಯಲ್ಲಿ ಮಂಡಿಸಲಾಗಿ, ಮಂಡಳಿಯು ಪ್ರಸ್ತಾವನೆಗೆ ಅನುಮೋದನೆ ನೀಡಿ, ಸರ್ಕಾರದ ಆಡಳಿತಾತ್ಮಕ ಅನುಮೋದನೆಗೆ ಶಿಫಾರಸ್ಸು ಮಾಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ತದನಂತರ ಮೇಲೆ ಓದಲಾದ ಪತ್ರ ದಿನಾಂಕ:13.09.2019ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಸದರಿ ಯೋಜನೆಯ ವಿವರವಾದ ಯೋಜನಾ ವರದಿಯನ್ನು ರೂ.108.00ಕೋಟಿಗಳಿಗೆ ತಯಾರಿಸಲಾಗಿದ್ದು, ಸದರಿ ಯೋಜನೆಯನ್ನು ಟರ್ನ್-ಕೀ ಆಧಾರದ ಮೇಲೆ 18 ತಿಂಗಳುಗಳ ಅವಧಿಯಲ್ಲಿ ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿರುತ್ತದೆ ಎಂದು, ಸದರಿ ಯೋಜನೆಗೆ ಪ್ರಸ್ತುತ ಸಾಲಿನಲ್ಲಿ ರೂ.40.00ಕೋಟಿಗಳ ಅನುದಾನದೊಂದಿಗೆ ಕೈಗೆತ್ತಿಕೊಂಡು

ಇನ್ನುಳಿದ ಮೊತ್ತವನ್ನು ಮುಂದಿನ ಆರ್ಥಿಕ ವರ್ಷದಲ್ಲಿ ಕರ್ನಾಟಕ ನೀರಾವರಿ ನಿಗಮಕ್ಕೆ ನೀಡುವ ಒಟ್ಟಾರೆ ಅನುದಾನದಲ್ಲಿ ಭರಿಸಬಹುದಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ, ಉಡುಪಿ ಜಿಲ್ಲೆ, ಕಾರ್ಕಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಸುತ್ತಮುತ್ತಲಿನ ಗ್ರಾಮಗಳಿಗೆ ಕುಡಿಯುವ ನೀರು ಹಾಗೂ ಸುಮಾರು 1500 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಎಣ್ಣೆಹೊಳೆ ಏತ ನೀರಾವರಿ ಯೋಜನೆಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ108.00ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 21 ಎಂಎಂಎಂ 2018**

**ಬೆಂಗಳೂರು, ದಿನಾಂಕ :09.10.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಉಡುಪಿ ಜಿಲ್ಲೆ, ಕಾರ್ಕಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಸುತ್ತಮುತ್ತಲಿನ ಗ್ರಾಮಗಳಿಗೆ ಕುಡಿಯುವ ನೀರು ಹಾಗೂ 1500 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಎಣ್ಣೆಹೊಳೆ ಏತ ನೀರಾವರಿ ಯೋಜನೆಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.108.00ಕೋಟಿ (ಒಂದುನೂರ ಎಂಟು ಕೋಟಿ ರೂಪಾಯಿ ಮಾತ್ರ) ಮೊತ್ತದ ವಿವರವಾದ ಯೋಜನಾ ವರದಿಗೆ ತಾತ್ವಿಕ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಹಾಗೂ ಪ್ರಸಕ್ತ ಸಾಲಿನಲ್ಲಿ ಸದರಿ ಯೋಜನೆಯ ವೆಚ್ಚವನ್ನು ರೂ.40.00 ಕೋಟಿಗಳಿಗೆ ಸೀಮಿತಗೊಳಿಸುವಂತೆ ತಿಳಿಸಿದೆ.

ಈ ಆದೇಶವನ್ನು ಕರ್ನಾಟಕ ಸರ್ಕಾರದ (ವ್ಯವಹಾರಗಳ ನಿರ್ವಹಣೆ) ನಿಯಮಗಳು, 1977ರ ಭಾಗ-1ರ ನಿಯಮ-17ರ ಉಪ ನಿಯಮ (2)ರ ಪರಂತುಕದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

[ಶ್ರೀಹರಿ ಎಸ್.ಆರ್.]
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-1),
ಜಲ ಸಂಪನ್ಮೂಲ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(G&SSA),ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398,ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.

4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ ಶಾಖೆ), ವಿಧಾನಸೌಧ, ಬೆಂಗಳೂರು (ಸಚಿವ ಸಂಪುಟ ಪ್ರಕರಣ ಸಂಖ್ಯೆ: ಸಿ:559/2019, ದಿನಾಂಕ:03.10.2019ರ ಮೇರೆಗೆ).
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಲೋ.ಇ., ಆರ್ಥಿಕ ಕೋಶ) ವಿಧಾನಸೌಧ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
8. ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
9. ನಿರ್ದೇಶಕರು, ಜಿಯೋಮ್ಯಾಟಿಕ್ಸ್ ಕೇಂದ್ರ, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
10. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ಬೆಂಗಳೂರು.
12. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
13. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
14. ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.